**SEPTEMBER 04 2024**

**ALL INDIA RADIO- DHARWAD**
**PRADESH SAMACHARA (KANNADA) 7:05 AM**

**ಮುಖ್ಯಾಂಶಗಳು**

- **ವನ್ಯಜೀವಿ ಮತ್ತು ಅರಣ್ಯ ಸಂಪತ್ತು ಕಾಪಾಡುವುದು ಪ್ರತಿಯೊಬ್ಬರ ಜವಾಬ್ದಾರಿ – ಮುಖ್ಯಮಂತ್ರಿ ಸಿದ್ದರಾಮಯ್ಯ.**
- **ಪೋಡಿ ಮುಕ್ತ ಅಭಿಯಾನ ಹಾಗೂ ಪೌತಿ ಖಾತೆ ಆಂದೋಲನಕ್ಕೆ ಕ್ರಮ – ಸಚಿವ ಕೃಷ್ಣ ಬೈರೇಗೌಡ.**
- **ಅನುದಾನಿತ ವಿಕಲಾಂಗಚೇತನ ಶಾಲಾ ವಿದ್ಯಾರ್ಥಿಗಳಿಗೆ ಮಧ್ಯಾಹ್ನದ ಬಿಸಿ ಊಟ ಯೋಜನೆ ವಿಸ್ತರಿಸಲು ಕ್ರಮ – ಸಚಿವ ಮಧು ಬಂಗಾರಪ್ಪ.**
- **ಡೆಂಘೀ ಸಾಂಕ್ರಾಮಿಕ ರೋಗ; ರಾಜ್ಯ ಸರ್ಕಾರ ಘೋಷಣೆ.**

**ಈಗ ವಾರ್ತೆಗಳ ವಿವರ**

**ವನ್ಯಜೀವಿ ಮತ್ತು ಅರಣ್ಯ ಸಂಪತ್ತು ಕಾಪಾಡುವ ಜವಾಬ್ದಾರಿ ಪ್ರತಿಯೊಬ್ಬರದ್ದು ಎಂದು** ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಅರಣ್ಯ ಇಲಾಖೆ ವತಿಯಿಂದ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಆಯೋಜಿಸಿದ್ದ ಅರಣ್ಯ ಅಧಿಕಾರಿ ಮತ್ತು ಸಿಬ್ಬಂದಿಗೆ ಮುಖ್ಯಮಂತ್ರಿಗಳ ವಿಶಿಷ್ಟ ಸೇವಾ ಪದಕ ಪ್ರದಾನ ಸಮಾರಂಭದಲ್ಲಿ 2022, 2023ನೇ ಸಾಲಿನ ಪದಕ ವಿಜೇತರಿಗೆ ಪದಕ ನೀಡಿ ಸನ್ಮಾನಿಸಿ ಮಾತನಾಡಿದ ಅವರು, ಆಫ್ರಿಕಾ ಬಿಟ್ಟರೆ ಅತಿ ಹೆಚ್ಚು ಅರಣ್ಯ ಪ್ರಾಣಿ ಸಂಪತ್ತು ಇರುವುದು ಭಾರತದಲ್ಲೇ. ಹಾಗೆಯೇ ಅರಣ್ಯದ ಪ್ರಮಾಣ ಇನ್ನೂ ಹೆಚ್ಚಾಗಬೇಕಿದೆ. ಅರಣ್ಯಾಧಿಕಾರಿಗಳು ಅರಣ್ಯ ಒತ್ತುವರಿ ತಡೆಯಬೇಕು ಎಂದರು.

ಕಾಡು ಪ್ರಾಣಿಗಳಿಗೆ ಆಹಾರ, ಮೇವು ಮತ್ತು ನೀರು ಕಾಡಿನ ಒಳಗೇ ಅಗತ್ಯವಿದ್ದಷ್ಟು ದೊರೆತರೆ ಅವು ಕಾಡಿನಿಂದ ಹೊರಗೆ ಬರುವುದಿಲ್ಲ. ಆಗ ಮಾನವ–ಪ್ರಾಣಿ ಸಂಘರ್ಷಕ್ಕೆ ಕಡಿವಾಣ ಬೀಳುತ್ತದೆ ಎಂದು ಹೇಳಿದರು.

*******

**ರೈತರು ಶೀಘ್ರವೇ ತಮ್ಮ** ಜಮೀನು ಪಹಣಿಗೆ ಆಧಾರ ಜೋಡಣೆ ಮಾಡಿಕೊಳ್ಳಬೇಕು. ಇದರಿಂದ ಜಮೀನು ಮಾರಾಟದಲ್ಲಾಗುವ ವಂಚನೆ ತಪ್ಪಿಸಬಹುದು ಎಂದು ಕಂದಾಯ ಖಾತೆ ಸಚಿವ ಕೃಷ್ಣ ಬೈರೇಗೌಡ ಹೇಳಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಭವನದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಬಹು ಮಾಲೀಕತ್ವ ಹೊಂದಿರುವ ಖಾಸಗಿ ಜಮೀನುಗಳ ಪೋಡಿ ಕಾರ್ಯ, ಸರ್ಕಾರಿ ಮತ್ತು ಖಾಸಗಿ ಸಹಭಾಗಿತ್ವದಲ್ಲಿನ  ದರಾಖಾಸ್ತು ಪೋಡಿ ಕಾರ್ಯ ಹಾಗೂ ಜಮೀನು ಮಾಲೀಕತ್ವವನ್ನು ವಾರಸುದಾರರಿಗೆ ಮಾಡಿಕೊಡುವ ಪೋತಿ ಖಾತೆ ಆಂದೋಲನವನ್ನು ರಾಜ್ಯದಲ್ಲಿ ಹಮ್ಮಿಕೊಳ್ಳಲಾಗುವುದು ಎಂದರು.

**ಧ್ವನಿ– ಸಚಿವ ಬೈರೇಗೌಡ ( 59 ಸೆಕೆಂದುಗಳು)**

*******

**ರಾಜ್ಯದ ಎಲ್ಲಾ ಅನುದಾನಿ**ತ ವಿಕಲಾಂಗಚೇತನರ ಶಾಲೆಗಳಲ್ಲಿ 1 ರಿಂದ 10 ನೇ ತರಗತಿ ವಿದ್ಯಾರ್ಥಿಗಳಿಗೆ ಮಧ್ಯಾಹ್ನದ ಬಿಸಿ ಊಟ ಯೋಜನೆ ವಿಸ್ತರಿಸುವ ಕುರಿತು ಸರ್ಕಾರದಿಂದ ಅಧಿಕೃತ ಆದೇಶ ಹೊರಡಿಸಲಾಗುವುದು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವ ಎಸ್.ಮಧು ಬಂಗಾರಪ್ಪ ಹೇಳಿದ್ದಾರೆ.

ಶಿವಮೊಗ್ಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶಿಕ್ಷಣ ಇಲಾಖೆಯಡಿ ದೊರೆಯುವ ಉಚಿತ ಸಮವಸ್ತ್ರ, ಶೂ, ಹಾಗೂ ಇನ್ನಿತರ ಸೌಲಭ್ಯಗಳನ್ನು ರಾಜ್ಯದ ಎಲ್ಲಾ ವಿಕಲಾಂಗಚೇತನರ ಮಕ್ಕಳ ಶಾಲೆಗಳಿಗೆ ವಿಸ್ತರಿಸಲು ಕೂಡಲೇ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

*******

**ಡೆಂಗಿ ಜ್ವರವನ್ನು ಸಾಂಕ್ರಾಮಿಕ ಕಾಯಿಲೆ ಎಂದು ರಾಜ್ಯ ಸರ್ಕಾರ ಘೋಷಿಸಿದೆ.**

ರಾಜ್ಯದಲ್ಲಿ ಈ ವರ್ಷ ಡೆಂಗಿ ಪ್ರಕರಣಗಳು ಅಧಿಕ ಸಂಖ್ಯೆಯಲ್ಲಿ ವರದಿಯಾದ ಹಿನ್ನೆಲೆ, ಈ ಕ್ರಮ ಕೈಗೊಳ್ಳಲಾಗಿದೆ ಎಂದು ಆರೋಗ್ಯ ಖಾತೆ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ಜಮೀನು, ನಿವೇಶನ, ಕಟ್ಟಡ, ನೀರಿನ ಟ್ಯಾಂಕ್, ಉದ್ಯಾನ, ಆಟದ ಮೈದಾನ ಸೇರಿದಂತೆ ಯಾವುದೇ ಸ್ಥಳದಲ್ಲಿ ಮಾಲೀಕರು ಅಥವಾ ಸಂಬಂಧಪಟ್ಟ ವ್ಯಕ್ತಿಗಳು ಸೊಳ್ಳೆಗಳ ಸಂತಾನೋತ್ಪತ್ತಿ ತಡೆಗೆ ಅಗತ್ಯ ಕ್ರಮಗಳನ್ನು ಕಡ್ಡಾಯವಾಗಿ ಕೈಗೊಳ್ಳಬೇಕು. ನೀರಿನ ಸಂಗ್ರಹ

ಪಾತ್ರೆಗಳು, ಸಂಪ್‌ಗಳು ಮತ್ತು ಓವರ್‌ಹೆಡ್ ಟ್ಯಾಂಕ್‌ಗಳು ಸುರಕ್ಷಿತವಾಗಿ ಮುಚ್ಚಿರುವುದನ್ನು ಖಚಿತಪಡಿಸಿಕೊಳ್ಳಬೇಕೆಂದು ಸೂಚಿಸಲಾಗಿದೆ.

ಸ್ವಚ್ಛತೆ ಬಗ್ಗೆ ನಿಗಾ ವಹಿಸಲು ಸಕ್ಷಮ ಪ್ರಾಧಿಕಾರ ರಚಿಸಲಾಗಿದೆ. ಈ ಪ್ರಾಧಿಕಾರವು ಡೆಂಗಿ ನಿಯಂತ್ರಣಾ ಕ್ರಮಗಳನ್ನು ಜಾರಿಗೆ ತರುವ, ಪರಿಶೀಲಿಸುವ ಮತ್ತು ನಿಯಮ ಉಲ್ಲಂಘಿಸಿದವರಿಗೆ ದಂಡ ವಿಧಿಸುವ ಅಧಿಕಾರ ಹೊಂದಿರಲಿದೆ ಎಂದು ಸಚಿವರು ತಿಳಿಸಿದ್ದಾರೆ.

*******

**ಅತಿವೃಷ್ಟಿಯಿಂದಾದ ಬೆಳೆ ಮತ್ತು ಮನೆ ಹಾನಿ ಕುರಿತು ಪರಿಶೀಲಿಸಿ** ಶೀಘ್ರದಲ್ಲೇ ವರದಿ ಸಲ್ಲಿಸುವುದರ ಜೊತೆಗೆ, ಇದ್ದಕ್ಕೂ ಮುನ್ನ ಮನೆ ಹಾನಿಗೆ ಸಂಬಂಧಿಸಿದಂತೆ ಬಾಕಿ ಉಳಿದಿರುವ ಪರಿಹಾರವನ್ನು ಆದ್ಯತೆ ಮೇಲೆ ವಿತರಿಸುವಂತೆ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಅಧಿಕಾರಿಗಳಿಗೆ ಸೂಚಿಸಿದ್ದಾರೆ.
ಯಾದಗಿರಿ ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಿನ್ನೆ ಪ್ರಕೃತಿ ವಿಕೋಪದಡಿ, ಬೆಳೆ, ರಸ್ತೆ, ಮೂಲಸೌಕರ್ಯ ಹಾನಿಯಾದ ಬಗ್ಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿ ನಂತರ ಮಾತನಾಡಿದ ಅವರು, ಜಿಲ್ಲೆಯ ವಿವಿಧ ತಾಲೂಕಗಳಲ್ಲಿ ಇತ್ತೀಚಿಗೆ ಸುರಿದ ಅತೀಯಾದ ಮಳೆಯಿಂದಾಗಿ ಬೆಳೆ ನಷ್ಟವಾಗಿರುವ ಬಗ್ಗೆ ಜಂಟಿ ಸಮೀಕ್ಷೆ ನಡೆಸಬೇಕು. ಅದರಂತೆ ಮನೆ ಹಾನಿ, ರಸ್ತೆ ಮೂಲಸೌಕರ್ಯಗಳ ಹಾನಿ ಕುರಿತು ಶೀಘ್ರದಲ್ಲೇ ಪರಿಶೀಲಿಸಿ ವರದಿ ಸಲ್ಲಿಸುವಂತೆ ತಿಳಿಸಿದರು.

*******

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ.**

*******

**ಕೋಚಿಂಗ್ ಸಂಸ್ಥೆಗಳಿಂದ** ಮೋಸಗೊಳಿಸುವಂಥ ಜಾಹೀರಾತು ಅಭ್ಯಾಸಗಳನ್ನು ತಡೆಯುವ ಗುರಿಯನ್ನು ಹೊಂದಿರುವುದರಿಂದ ಗ್ರಾಹಕರು, ಅದರಲ್ಲೂ ವಿದ್ಯಾರ್ಥಿ ಸಮುದಾಯದ ಹಕ್ಕುಗಳನ್ನು ಸಂರಕ್ಷಿಸಲು ಮಾರ್ಗಸೂಚಿಗಳನ್ನು ಜಾರಿಗೊಳಿಸಲು ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಕೇಂದ್ರ ಗ್ರಾಹಕ ವ್ಯವಹಾರಗಳ ಖಾತೆ ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ.

ಕೇಂದ್ರೀಯ ಗ್ರಾಹಕ ಸಂರಕ್ಷಣಾ ಪ್ರಾಧಿಕಾರದಿಂದ ಪ್ರಸ್ತಾವಿತ 'ಕೋಚಿಂಗ್ ಸೆಕ್ಟರ್‌ನಲ್ಲಿ ದಾರಿತಪ್ಪಿಸುವ ಜಾಹೀರಾತುಗಳಿಗಾಗಿ ಮಾರ್ಗಸೂಚಿ'ಗಳನ್ನು ಪರಿಶೀಲಿಸಲು ಗ್ರಾಹಕ ವ್ಯವಹಾರಗಳ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಅವರು ಮಾತನಾಡಿದರು.

*******

**ಜನರೇಟೀವ್ ಎಐ ಮತ್ತು ಮುಂಚೂಣಿಗೆ ಬರುತ್ತಿರುವ ಆಧುನಿಕ** ತಂತ್ರಜ್ಞಾನಗಳಿಗೆ ಸಂಬಂಧಿಸಿದ ಕೌಶಲಗಳನ್ನು ಕಲಿಸಲು ರಾಜ್ಯ ಸರ್ಕಾರದೊಂದಿಗೆ ಒಡಂಬಡಿಕೆ ಮಾಡಿಕೊಳ್ಳಲು ಮೈಕ್ರೋಸಾಫ್ಟ್ ಕಂಪನಿಯು ಉತ್ಸುಕವಾಗಿದೆ ಎಂದು ಭಾರೀ ಮತ್ತು ಮಧ್ಯಮ ಕೈಗಾರಿಕಾ ಖಾತೆ ಸಚಿವ ಎಂ.ಬಿ.ಪಾಟೀಲ ಹೇಳಿದ್ದಾರೆ.

ಬೆಂಗಳೂರಿನಲ್ಲಿ ನಿನ್ನೆ ತಮ್ಮನ್ನು ಭೇಟಿಯಾದ ಮೈಕ್ರೋಸಾಫ್ಟ್ ಕಂಪನಿಯ ಭಾರತ ಮತ್ತು ದಕ್ಷಿಣ ಏಷ್ಯಾದ ಅಧ್ಯಕ್ಷ ಪುನೀತ್ ಚಾಂದೋಕ್ ನೇತೃತ್ವದ ಉನ್ನತ ಮಟ್ಟದ ನಿಯೋಗದ ಜತೆ ವಿಚಾರ ವಿನಿಮಯ ನಡೆಸಿದ ಬಳಿಕ ಮಾತನಾಡಿದ ಅವರು, ಕರ್ನಾಟಕವನ್ನು ಭಾರತದ ಎಐ ತಂತ್ರಜ್ಞಾನದ ಪ್ರಮುಖ ತಾಣವನ್ನಾಗಿ ಮಾಡಲು ಮೈಕ್ರೋಸಾಫ್ಟ್ ಬಯಸಿದೆ. ಹೂಡಿಕೆದಾರರಿಗೆ ನೆರವು ನೀಡುವಂತಹ ಪ್ರಕ್ರಿಯೆಗಳಿಗೆ ಎಐ ತಂತ್ರಜ್ಞಾನವನ್ನು ಹೇಗೆ ಅನ್ವಯಿಸಬಹುದು ಮತ್ತು ಇದಕ್ಕೆ ಪರಿಣತರನ್ನು ಹೇಗೆ ತೊಡಗಿಸಬಹುದು ಎಂದು ಕಂಪನಿಯು ಚಿಂತನೆ ನಡೆಸಿದೆ ಎಂದು ಮಾಹಿತಿ ನೀಡಿದರು.

ಫೆಬ್ರುವರಿ 12ರಿಂದ 14ರವರೆಗೆ ಬೆಂಗಳೂರಿನಲ್ಲಿ ನಡೆಯಲಿರುವ ಜಾಗತಿಕ ಹೂಡಿಕೆದಾರರ ಸಮಾವೇಶದಲ್ಲಿ ಮೈಕ್ರೋಸಾಫ್ಟ್ ಕಂಪನಿಯು ಸಕ್ರಿಯ ಪಾಲ್ಗೊಳ್ಳುವಿಕೆ ಬಗ್ಗೆ ಈ ಸಂದರ್ಭದಲ್ಲಿ ಚರ್ಚಿಸಲಾಯಿತು.

*******

**ಬೀದರ ಜಿಲ್ಲೆ ಬಸವಕಲ್ಯಾಣ ತಾಲೂಕಿನ ರಾಜೇಶ್ವರದಲ್ಲಿ, ನಿನ್ನೆ ಸಾಂಪ್ರದಾಯಿಕ** ಹೋಳಾ ಹಬ್ಬವನ್ನು ಸಂಭ್ರಮ ಹಾಗೂ ಸಡಗರದಿಂದ ಆಚರಿಸಲಾಯಿತು.

ಬೆನಕನ ಅಮವಾಸ್ಯೆ ದಿನದಂದು ಆಚರಿಸಲ್ಪಡುವ ಈ ಹಬ್ಬವನ್ನು ನೆರೆ ರಾಜ್ಯ ಮಹಾರಾಷ್ಟ್ರದಲ್ಲಿ ಪೋಳ ಎಂದೂ ಕರೆಯುತ್ತಾರೆ.

ಕೃಷಿ ಸಂಸ್ಕೃತಿಯ ವಿಶಿಷ್ಟ ಹೋಳಾ ಹಬ್ಬದ ಬಗ್ಗೆ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ ಗ್ರಾಮದ ಹಿರಿಯರಾದ ಲಕ್ಕಪ್ಪ ತಿಪ್ಪಣ್ಣ.

**ಧ್ವನಿ : ಲಕ್ಕಪ್ಪ ತಿಪ್ಪಣ್ಣ 26 ಸೆಕೆಂದುಗಳು**

*******

**ರಾಜ್ಯ ಸರ್ಕಾರವು 'ಸರ್ವರಿಗೂ ವಿಜ್ಞಾನ –ಸುಲಭ ವಿಜ್ಞಾನ – ಸುಸ್ಥಿರ ಅಭಿವೃದ್ಧಿಗೆ** ವಿಜ್ಞಾನ' ಎಂಬ ಧ್ಯೇಯವಾಕ್ಯದಡಿ ವಿಜ್ಞಾನ ತಂತ್ರಜ್ಞಾನ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ಸಚಿವ ಎನ್.ಎಸ್ ಭೋಸರಾಜು ಹೇಳಿದ್ದಾರೆ.

ಧಾರವಾಡದಲ್ಲಿರುವ ಧಾರವಾಡ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರಕ್ಕೆ ಭೇಟಿ ನೀಡಿ ನಂತರ ಮಾತನಾಡಿದ ಅವರು, ಧಾರವಾಡ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರವು 24 ಎಕರೆ ಜಾಗೆ ಹೊಂದಿದ್ದು, ಅಂತಾರಾಷ್ಟ್ರೀಯ ಕೇಂದ್ರವನ್ನಾಗಿ ಮೇಲ್ದರ್ಜೆಗೆ ಏರಿಸಲು ಕ್ರಮ ಕೈಗೊಳ್ಳಲಾಗುವುದು. ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಮಕ್ಕಳ ಅನುಕೂಲಕ್ಕಾಗಿ ವಿಜ್ಞಾನ

ಕೇಂದ್ರಗಳನ್ನು ಹಾಗೂ ತಾರಾಲಯ ಸ್ಥಾಪಿಸುವ ನಿಟ್ಟಿನಲ್ಲಿ ಸರ್ಕಾರ ಕ್ರಮ ಕೈಗೊಳ್ಳುತ್ತಿದೆ. ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ಬೆಂಗಳೂರಿನಲ್ಲಿ 200 ಕೋಟಿ ರೂಪಾಯಿ ವೆಚ್ಚದಲ್ಲಿ ವಿಜ್ಞಾನ ನಗರ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು.

*******

## ಈಗ ಸಂಕ್ಷಿಪ್ತ ಸುದ್ದಿಗಳು

**ಹುಬ್ಬಳ್ಳಿಯ ಡೀಸೆಲ್ ಶೆಡ್‌ನಲ್ಲಿ ಎಲಕ್ಟ್ರಿಕ್ ಲೋಕೋಮೋಟಿವ್‌ಗಳ ನಿರ್ವಹಣೆಗಾಗಿ** ಅತ್ಯಾಧುನಿಕ ಮೂಲಸೌಕರ್ಯ ಸೌಲಭ್ಯಗಳನ್ನು ಸೌತ್ ವೆಸ್ಟರ್ನ್ ರೈಲ್ವೆ ಜನರಲ್ ಮ್ಯಾನೇಜರ್ ಅರವಿಂದ್ ಶ್ರೀವಾಸ್ತವ ಉದ್ಘಾಟಿಸಿದರು.

*******

**ಕಲಬುರಗಿಯ** ಭೀಮಾ ಹಾಗೂ ಬೆಣ್ಣೆತೋರಾ ನದಿ ಪಾತ್ರದಲ್ಲಿ, ಮಳೆ ಹಿನ್ನೆಲೆ, ನಗರಕ್ಕೆ ಪೂರೈಕೆಯಾಗುತ್ತಿರುವ ಕುಡಿಯುವ ನೀರು, ಮಣ್ಣು ಮಿಶ್ರಿತವಾಗಿದೆ.

ಕುಡಿಯುವ ನೀರನ್ನು ಶುದ್ಧೀಕರಿಸಿ, ಸೂಪರ್ ಕ್ಲೋರಿನೇಶನ್ ಮಾಡಿ ಸರಬರಾಜು ಮಾಡಲಾಗುತ್ತಿದೆ. ಕಲಬುರಗಿ ನಗರದ ಸಾರ್ವಜನಿಕರು ಮುನ್ನೆಚ್ಚರಿಕೆ ಕ್ರಮವಾಗಿ ಕಾಯಿಸಿ, ಆರಿಸಿ ಬಳಿಕ ಸೋಸಿದ ನೀರನ್ನು ಕುಡಿಯಲು, ಕಾರ್ಯಪಾಲಕ ಅಭಿಯಂತರರು ಕೋರಿದ್ದಾರೆ.

*******

**ನಗರ ಸ್ಥಳೀಯ ಸ್ವಯಂ ಆಡಳಿತ** ಸಂಸ್ಥೆಗಳಲ್ಲಿ ಸ್ವಯಂ ಘೋಷಿತ ಆಸ್ತಿ ತೆರಿಗೆ ಪಾವತಿ ಉತ್ತೇಜಿಸಲು ಹಾಗೂ ಪೂರ್ಣ ಪ್ರಮಾಣದ ಆಸ್ತಿ ತೆರಿಗೆ ಪಾವತಿಸಿದಲ್ಲಿ, ಶೇಕಡ 5 ರಷ್ಟು ರಿಯಾಯಿತಿ ನೀಡುವ ಅವಧಿಯನ್ನು, ಈ ತಿಂಗಳ 14ರ ವರೆಗೆ ಕಂದಾಯ ಇಲಾಖೆ ವಿಸ್ತರಿಸಿ, ಆದೇಶಿಸಿದೆ. ಆಸ್ತಿ ತೆರಿಗೆ ಪಾವತಿ ಅವಧಿ ವಿಸ್ತರಣೆಯಾಗಿರುವ ಬಗ್ಗೆ, ವಿಶೇಷ ರೀತಿಯಲ್ಲಿ ಪ್ರಚಾರ ಮತ್ತು ಜನ ಜಾಗ್ರತಿ ಮೂಡಿಸುವಂತೆ, ಸ್ಥಳೀಯ ಸ್ವಯಂ ಆಡಳಿತ ಸಂಸ್ಥೆಗಳಿಗೆ ಸೂಚಿಸಲಾಗಿದೆ.

*******

**ಗೌರಿಗಣೇಶ ಹಬ್ಬದ ಹಿನ್ನೆಲೆಯಲ್ಲಿ, ಗಣೇಶ ಮೂರ್ತಿ** ಪ್ರತಿಷ್ಠಾಪಿಸುವ ಪೆಂಡಾಲ್‌ಗಳಲ್ಲಿ ಪ್ರಸಾದವಾಗಿ ವಿತರಿಸಲಾಗುವ ಆಹಾರ ಪದಾರ್ಥಗಳ ಶುಚಿತ್ವ, ಗುಣಮಟ್ಟ ಮತ್ತು ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು, ಭಾರತೀಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರ ಪರವಾನಗಿ ಪಡೆದಿರುವ ವ್ಯಕ್ತಿ, ಸಂಸ್ಥೆಗಳಿಂದ ಮಾತ್ರ ಪ್ರಸಾದ ಸಿದ್ಧಪಡಿಸುವಂತೆ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ಆದೇಶಿಸಿದೆ.

*******

**ಡಿಸೆಂಬರ್ 20 ರಿಂದ 3 ದಿನಗಳ ಕಾಲ ಮಂಡ್ಯದಲ್ಲಿ** ನಡೆಯಲಿರುವ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಬರುವ ಅತಿಥಿಗಳನ್ನು ಅತಿ ಗಣ್ಯರು, ಗಣ್ಯರು, ಆಹ್ವಾನಿತರು, ನೋಂದಾಯಿತ ಸದಸ್ಯರು ಎಂದು ನಾಲ್ಕು ವಿಭಾಗಗಳಾಗಿ ವಿಂಗಡಿಸಿ ವಸತಿ ಸೌಲಭ್ಯ ಕಲ್ಪಿಸಬೇಕು ಎಂದು ಶಾಸಕ ಪಿ.ರವಿಕುಮಾರ್ ಗಣಿಗ ತಿಳಿಸಿದ್ದಾರೆ.

**ಈ ಬಾರಿಯ ಶ್ರೀರಂಗಪಟ್ಟಣ ದಸರಾ ಕಾರ್ಯಕ್ರಮವನ್ನು** ಅದ್ದೂರಿಯಾಗಿ, ಸಂಪ್ರದಾಯಿಕವಾಗಿ, ಸಂಭ್ರಮ ಹಾಗೂ ವಿಜೃಂಭಣೆಯಿಂದ ಆಚರಿಸಬೇಕೆಂದು ಮಂಡ್ಯ ಜಿಲ್ಲಾಧಿಕಾರಿ ಡಾಕ್ಟರ್ ಕುಮಾರ ತಿಳಿಸಿದ್ದಾರೆ.

**ಬಾಲ್ಯವಿವಾಹ ತಡೆಗಟ್ಟಲು** ಅಧಿಕಾರಿಗಳು ನಿರ್ಲಕ್ಷ್ಯ ವಹಿಸದೆ ಕಾರ್ಯ ನಿರ್ವಹಿಸಬೇಕು ಎಂದು ಕಲಬುರಗಿ ಜಿಲ್ಲಾಧಿಕಾರಿ ಬಿ ಫೌಜಿಯಾ ತರನ್ನುಮ್ ಸೂಚಿಸಿದ್ದಾರೆ.

**ಹಾವೇರಿ ಜಿಲ್ಲೆಯಲ್ಲಿ** ಗಣಪತಿ ಹಬ್ಬದ ಆಚರಣೆಗೆ ಸಂಬಂಧಿಸಿದಂತೆ ಜಿಲ್ಲಾಡಳಿತ ರೂಪಿಸಿರುವ ನಿಯಮಗಳನ್ನು ಪ್ರತಿಯೊಬ್ಬರು ಪಾಲಿಸಬೇಕು ಎಂದು ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಅಂಶು ಕುಮಾರ ತಿಳಿಸಿದ್ದಾರೆ.